All India Radio: Bangalore
National Bulletin In Kannada
16.01.2026  1.10 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

- ಆತ್ಮನಿರ್ಭರ ಭಾರತ ನಿರ್ಮಾಣದಲ್ಲಿ ಸ್ಟಾರ್ಟ್‌ಅಪ್‌ಗಳ ಪಾತ್ರ ಪ್ರಮುಖ - ಪ್ರಧಾನಿ ನರೇಂದ್ರ ಮೋದಿ
- ಮುಂಬರುವ ಸಂಸತ್ತಿನ ಬಜೆಟ್ ಅಧಿವೇಶನದಲ್ಲಿ ಬಿತ್ತನೆ ಬೀಜ ಕಾಯ್ದೆ-೨೦೨೬ ಜಾರಿಗೆ ತರಲು ನಿರ್ಧಾರ - ಸಚಿವ ಶಿವರಾಜ್ ಸಿಂಗ್ ಚೌಹಾಣ್
- ೩ನೇ ಅಂತಾರಾಷ್ಟ್ರೀಯ ಗಾಳಿಪಟ ಉತ್ಸವಕ್ಕೆ ನವದೆಹಲಿಯಲ್ಲಿಂದು ಕೇಂದ್ರ ಸಚಿವ ಅಮಿತ್ ಶಾ ಚಾಲನೆ
- ಇರಾನ್ ಉದ್ವಿಗ್ನ ಪರಿಸ್ಥಿತಿ ಕುರಿತು ಚರ್ಚಿಸಲು ವಿಶ್ವಸಂಸ್ಥೆ ಭದ್ರತಾ ಮಂಡಳಿ ತುರ್ತು ಸಭೆ
- ಇಂಡಿಯಾ ಓಪನ್ ಬ್ಯಾಡ್ಮಿಂಟನ್; ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿಂದು ಭಾರತದ ಲಕ್ಷ್ಯ ಸೇನ್ ಸ್ಪರ್ಧೆ

<><><><>

ಆತ್ಮನಿರ್ಭರ ಭಾರತ ನಿರ್ಮಾಣದಲ್ಲಿ ಸ್ಟಾರ್ಟ್‌ಅಪ್‌ಗಳು ಪ್ರಮುಖ ಪಾತ್ರವಹಿಸುತ್ತಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸ್ಟಾರ್ಟ್ ಅಪ್ ಇಂಡಿಯಾ ಉಪಕ್ರಮ ಹತ್ತು ವರ್ಷಗಳನ್ನು ಪೂರೈಸುತ್ತಿರುವ ಸಂದರ್ಭದಲ್ಲಿ ಇಂದು ದೇಶದ ನವೋದ್ಯಮ ಸಮುದಾಯಕ್ಕೆ ರಾಷ್ಟ್ರೀಯ ನವೋದ್ಯಮ ದಿನದ ಶುಭಾಶಯ ಕೋರಿರುವ ಪ್ರಧಾನಿ, ಯುವ ನಾವೀನ್ಯಕಾರರಿಗೆ ಬೆಂಬಲ ನೀಡಲು ಸರ್ಕಾರ ಬದ್ಧವಾಗಿದೆ ಎಂದು ಪುನರುಚ್ಛರಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ಈ ಸಂದರ್ಭ ಜಾಗತಿಕ ನವೋದ್ಯಮ ಪರಿಸರ ವ್ಯವಸ್ಥೆಯಲ್ಲಿ ಭಾರತದ ಸ್ಥಾನವನ್ನು ಬಲಪಡಿಸಿದ ಯುವಕರ ಧೈರ್ಯ, ನಾವೀನ್ಯತೆ ಮತ್ತು ಉದ್ಯಮಶೀಲತಾ ಮನೋಭಾವವನ್ನು ಆಚರಿಸುತ್ತದೆ.

ಸುಧಾರಣೆಗಳ ಪಥದಲ್ಲಿ ಮುನ್ನುಗ್ಗುತ್ತಿರುವ ಭಾರತ ಬಾಹ್ಯಾಕಾಶ ಮತ್ತು ರಕ್ಷಣೆಯಂತಹ ಹೊಸ ಕ್ಷೇತ್ರಗಳಲ್ಲಿ ನವೋದ್ಯಮಗಳು ತೊಡಗಿಸಿಕೊಳ್ಳಲು ಹೆಚ್ಚು ಅನುಕೂಲಕರ ವಾತಾವರಣವನ್ನು ಸೃಷ್ಟಿಸಿದೆ ಎಂದಿದ್ದಾರೆ. ನವದೆಹಲಿಯ ಭಾರತ್ ಮಂಟಪದಲ್ಲಿಂದು ನಡೆಯಲಿರುವ ಸ್ಟಾರ್ಟ್‌ಅಪ್ ಇಂಡಿಯಾ ಉಪಕ್ರಮ ೧೦ ವರ್ಷಗಳನ್ನು ಪೂರೈಸುತ್ತಿರುವ ಸಂದರ್ಭದ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಈ ವೇಳೆ ಪ್ರಧಾನಿ, ಭಾರತದ ನವೋದ್ಯಮ ಪರಿಸರ ವ್ಯವಸ್ಥೆಯ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ. ಆಯ್ದ ನವೋದ್ಯಮ ಪ್ರತಿನಿಧಿಗಳು ತಮ್ಮ ಉದ್ಯಮಶೀಲ ಪಯಣದ ಒಳನೋಟಗಳನ್ನು ಹಂಚಿಕೊಳ್ಳಲಿದ್ದಾರೆ.

### ಸ್ಟಾರ್ಟ್ ಅಪ್ ಇಂಡಿಯಾ ಕುರಿತ ಒಂದು ವರದಿ

ಸ್ಟಾರ್ಟ್‌ಅಪ್ ಇಂಡಿಯಾವನ್ನು ೨೦೧೬ರ ಜನವರಿ ೧೬ ರಂದು ಪ್ರಧಾನಿ ನರೇಂದ್ರ ಮೋದಿ ಅವರು ನಾವೀನ್ಯತೆಯನ್ನು ಪೋಷಿಸಲು, ಉದ್ಯಮಶೀಲತೆಯನ್ನು ಉತ್ತೇಜಿಸಲು ಮತ್ತು ಹೂಡಿಕೆ ಆಧಾರಿತ ಬೆಳವಣಿಗೆಯನ್ನು ಸಕ್ರಿಯಗೊಳಿಸಲು ಪರಿವರ್ತಕ ರಾಷ್ಟ್ರೀಯ ಕಾರ್ಯಕ್ರಮವಾಗಿ ಪ್ರಾರಂಭಿಸಿದರು. ಭಾರತವನ್ನು ಉದ್ಯೋಗಾಕಾಂಕ್ಷಿಗಳ ಬದಲು ಉದ್ಯೋಗ ಸೃಷ್ಟಿಕರ್ತರ ರಾಷ್ಟ್ರವನ್ನಾಗಿ ಮಾಡುವುದು ಈ ಉಪಕ್ರಮದ ಉದ್ದೇಶವಾಗಿದೆ. ಕಳೆದ ದಶಕದಲ್ಲಿ, ಸ್ಟಾರ್ಟ್‌ಅಪ್ ಇಂಡಿಯಾ ಭಾರತದ ಆರ್ಥಿಕ ಮತ್ತು ನಾವೀನ್ಯತೆ ವ್ಯವಸ್ಥೆಯ ಆಧಾರವಾಗಿ ಹೊರಹೊಮ್ಮಿದೆ. ಇದು ಸಾಂಸ್ಥಿಕ ಕಾರ್ಯವಿಧಾನಗಳನ್ನು ಬಲಪಡಿಸಿದೆ, ಬಂಡವಾಳ ಮತ್ತು ಮಾರ್ಗದರ್ಶನಕ್ಕೆ ಪ್ರವೇಶವನ್ನು ವಿಸ್ತರಿಸಿದೆ ಹಾಗೂ ವಲಯಗಳು ಮತ್ತು ಭೌಗೋಳಿಕವಾಗಿ ಸ್ಟಾರ್ಟ್‌ಅಪ್‌ಗಳು ಬೆಳೆಯಲು ಮತ್ತು ಅಳೆಯಲು ಅನುವು ಮಾಡಿಕೊಡುವ ವಾತಾವರಣವನ್ನು ಬೆಳೆಸಿದೆ. ಈ ಅವಧಿಯಲ್ಲಿ ಭಾರತದ ಸ್ಟಾರ್ಟ್‌ಅಪ್ ಪರಿಸರ ವ್ಯವಸ್ಥೆಯು ಅಭೂತಪೂರ್ವ ವಿಸ್ತರಣೆಗೆ ಸಾಕ್ಷಿಯಾಗಿದೆ. ದೇಶಾದ್ಯಂತ ಎರಡು ಲಕ್ಷಕ್ಕೂ ಹೆಚ್ಚು ಸ್ಟಾರ್ಟ್‌ಅಪ್‌ಗಳು ಗುರುತಿಸಲ್ಪಟ್ಟಿವೆ. ಈ ಉದ್ಯಮಗಳು ಉದ್ಯೋಗ ಸೃಷ್ಟಿ, ನಾವೀನ್ಯತೆ-ನೇತೃತ್ವದ ಆರ್ಥಿಕ ಬೆಳವಣಿಗೆ ಮತ್ತು ವೈವಿಧ್ಯಮಯ ವಲಯಗಳಲ್ಲಿ ದೇಶೀಯ ಮೌಲ್ಯ ಸರಪಳಿಗಳನ್ನು ಬಲಪಡಿಸುವ ಗಮನಾರ್ಹ ಚಾಲಕ ಶಕ್ತಿಗಳಾಗಿವೆ. ೨೦೪೭ರ ವಿಕಸಿತ ಭಾರತದ ವಿಶಾಲ ದೃಷ್ಟಿಕೋನದೊಂದಿಗೆ, ನವೋದ್ಯಮಗಳು ದೇಶದ ಅಭಿವೃದ್ಧಿ ಪಥದ ಕೇಂದ್ರಬಿಂದುವಾಗಲು ಸಜ್ಜಾಗಿವೆ.

<><><><>

ಮುಂಬರುವ ಸಂಸತ್ತಿನ ಬಜೆಟ್ ಅಧಿವೇಶನದಲ್ಲಿ ಸರ್ಕಾರ ಬಿತ್ತನೆ ಬೀಜ ಕಾಯ್ದೆ-೨೦೨೬ ಅನ್ನು ಜಾರಿಗೆ ತರಲಿದೆ. ನವದೆಹಲಿಯಲ್ಲಿಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಕಳಪೆ ಗುಣಮಟ್ಟದ ನಕಲಿ ಮತ್ತು ಅನಧಿಕೃತ ಬಿತ್ತನೆ ಬೀಜಗಳ ಮಾರಾಟವನ್ನು ತಡೆಯುವ ಗುರಿಯನ್ನು ಈ ಶಾಸನ ಹೊಂದಿದೆ. ರೈತರಿಗೆ ಉತ್ತಮ ಗುಣಮಟ್ಟದ ಪ್ರಮಾಣೀಕೃತ ಬಿತ್ತನೆ ಬೀಜಗಳನ್ನು ಖಚಿತ ಪಡಿಸುವುದು ಹಾಗೂ ಹವಾಮಾನ ನಿರೋಧಕ ಪ್ರಬೇಧಗಳನ್ನು ಉತ್ತೇಜಿಸುವುದು ಇದರ ಗುರಿಯಾಗಿದೆ ಎಂದು ತಿಳಿಸಿದರು. ನೂತನ ಕಾನೂನು ಸಂಪೂರ್ಣ ಪತ್ತೆಹಚ್ಚುವಿಕೆಯನ್ನು ಖಚಿತಪಡಿಸುವುದರಿಂದ ರೈತರು ಬಿತ್ತನೆ ಬೀಜಗಳು ಎಲ್ಲಿಂದ ಬಂದವು ಮತ್ತು ಅವುಗಳನ್ನು ಯಾರು ಪೂರೈಸಿದರು ಎಂಬುದನ್ನು ತಿಳಿದುಕೊಳ್ಳಬಹುದಾಗಿದೆ ಎಂದು ಹೇಳಿದರು.

<><><><>

ನವದೆಹಲಿಯಲ್ಲಿ ೩ನೇ ಅಂತಾರಾಷ್ಟ್ರೀಯ ಗಾಳಿಪಟ ಉತ್ಸವವನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಉದ್ಘಾಟಿಸಿದರು. ಈ ಕಾರ್ಯಕ್ರಮವು ಬಾನ್ಸೆರಾ ಉದ್ಯಾನವನದ ಹುಲ್ಲುಗಾವಲಿನಲ್ಲಿ ನಡೆಯುತ್ತಿದೆ. ಕಾರ್ಯಕ್ರಮದಲ್ಲಿ ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿನಯ್ ಕುಮಾರ್ ಸಕ್ಸೇನಾ, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಸಚಿವ ಅಮಿತ್ ಶಾ, ಉತ್ತರಾಯಣ ಪರ್ವ ಕಾಲವು ದೇಶದ ವಿವಿಧ ಭಾಗಗಳಲ್ಲಿ ಹಲವು ರೀತಿಯಲ್ಲಿ ಕರೆಯಲ್ಪಡುತ್ತದೆ. ಪರಂಪರಾಗತವಾಗಿ ನಮ್ಮಲ್ಲಿ ಸೂರ್ಯ ದೇವರ ಉತ್ತರದೆಡೆಗೆ ಚಲನೆ ಶುಭ ಎಂದು ಪರಿಗಣಿಸಲಾಗಿದೆ. ಇದೊಂದು ರೈತರ ಉತ್ಸವವಾಗಿದ್ದು, ಒಂದು ರೀತಿಯಲ್ಲಿ ರೈತರು ಹೊಸ ವರ್ಷವನ್ನು ಆರಂಭಿಸುತ್ತಾರೆ ಎಂದರು. ಭಾರತೀಯರು ಉತ್ಸವ ಪ್ರಿಯರಾಗಿದ್ದು, ಇಂತಹ ಸಂದರ್ಭಗಳ ಮೂಲಕ ಒಟ್ಟು ಸಮಾಜವನ್ನು ಒಂದಾಗಿಸುವ ಮನೋಭಾವದೊಂದಿಗೆ ಮುನ್ನಡೆಯುತ್ತಾರೆ. ಉತ್ತರಾಯಣ ಹಬ್ಬವು ಅದರದೇ ಒಂದು ಭಾಗವಾಗಿದೆ ಎಂದು ಹೇಳಿದರು. ಸಾಂಸ್ಕೃತಿಕ ಚಟುವಟಿಕೆಗಳು ಮತ್ತು ಸಾರ್ವಜನಿಕ ಭಾಗವಹಿಸುವಿಕೆಯನ್ನು ಉತ್ತೇಜಿಸುವುದು ಈ ಕಾರ್ಯಕ್ರಮದ ಗುರಿಯಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಗಾಳಿಪಟ ಉತ್ಸವವನ್ನು ವೀಕ್ಷಿಸುವ ನಿರೀಕ್ಷೆಯಿದೆ.

<><><><>

ಅಂಕಿಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯವು ೨೦೨೬ರ ಅಂಕಿಅಂಶದಲ್ಲಿ ಸುಖತ್ಮೆ ರಾಷ್ಟ್ರೀಯ ಪ್ರಶಸ್ತಿಗೆ ನಾಮನಿರ್ದೇಶನಗಳನ್ನು ಆಹ್ವಾನಿಸಿದೆ. ಈ ಪ್ರಶಸ್ತಿಯು ಉತ್ತಮ ಗುಣಮಟ್ಟದ ಸಂಶೋಧನಾ ಕಾರ್ಯ ಮತ್ತು ಅಧಿಕೃತ ಅಂಕಿಅಂಶಗಳ ವ್ಯವಸ್ಥೆಯನ್ನು ಸುಧಾರಿಸುವ ವಿಷಯದಲ್ಲಿ ವ್ಯಕ್ತಿಗಳ ಕೊಡುಗೆಗಳನ್ನು ಗುರುತಿಸುತ್ತದೆ. ಈ ತಿಂಗಳ ೩೧ ರವರೆಗೆ ರಾಷ್ಟ್ರೀಯ ಪ್ರಶಸ್ತಿಗಳ ಪೋರ್ಟಲ್‌ನಲ್ಲಿ ನಾಮನಿರ್ದೇಶನಗಳನ್ನು ಕಳುಹಿಸಬಹುದು.

<><><><>

ಇರಾನ್‌ನಲ್ಲಿ ರಾಷ್ಟ್ರವ್ಯಾಪಿ ಸರ್ಕಾರಿ ವಿರೋಧಿ ಪ್ರತಿಭಟನೆಗಳು ಹಾಗೂ ಅವುಗಳನ್ನು ಹತ್ತಿಕ್ಕಲು ಭದ್ರತಾ ಪಡೆಗಳು ಕೈಗೊಂಡಿರುವ ಹಿಂಸಾತ್ಮಕ ಕ್ರಮದಿಂದಾಗಿ ವೇಗವಾಗಿ ಹದಗೆಡುತ್ತಿರುವ ಪರಿಸ್ಥಿತಿಯ ಕುರಿತು ಚರ್ಚಿಸಲು  ವಿಶ್ವಸಂಸ್ಥೆಯ ಭದ್ರತಾ ಮಂಡಳಿ - ಯುಎನ್‌ಎಸ್‌ಸಿ ನ್ಯೂಯಾರ್ಕ್‌ನಲ್ಲಿ ನಿನ್ನೆ ತುರ್ತು ಸಭೆ ನಡೆಸಿತು. ಆರ್ಥಿಕ ಸಂಕಷ್ಟ, ಏರುತ್ತಿರುವ ಹಣದುಬ್ಬರ ಮತ್ತು ಕುಸಿಯುತ್ತಿರುವ ಕರೆನ್ಸಿಯಿಂದ ಉಂಟಾದ ಅಶಾಂತಿ, ನೂರಾರು ಜನರ ಸಾವಿಗೆ ಮತ್ತು ಸಾವಿರಾರು ಜನರ ಬಂಧನಕ್ಕೆ ಕಾರಣವಾಗಿದೆ. ಬಿಕ್ಕಟ್ಟನ್ನು ಪರಿಹರಿಸಲು ಅಮೆರಿಕ ಈ ಸಭೆಯನ್ನು ಕರೆದಿತ್ತು.  ಇರಾನ್ ಎಲ್ಲಾ ಆರೋಪಗಳನ್ನು ತಳ್ಳಿ ಹಾಕಿದ್ದು, ಅಶಾಂತಿಗೆ ವಿದೇಶಿ ಹಸ್ತಕ್ಷೇಪ ಕಾರಣ ಎಂದಿದೆ. ಈ ನಡುವೆ ರಷ್ಯಾ ಮತ್ತು ಚೀನಾ ಪರಿಸ್ಥಿತಿಯನ್ನು ಆಂತರಿಕ ವಿಷಯವೆಂದು ವಿವರಿಸಿದ್ದು, ಸಂಯಮದಿಂದಿರುವಂತೆ ಕರೆ ನೀಡಿವೆ. ಉದ್ವಿಗ್ನತೆಯ ಕಾವು ಪಶ್ಚಿಮ ಏಷ್ಯಾದಾದ್ಯಂತ ತಟ್ಟುತ್ತಿದೆ. ಇರಾನ್ ಯಾವುದೇ ವಿವರಣೆ ನೀಡದೆ ಕೆಲ ಹೊತ್ತು ತನ್ನ ವಾಯು ಪ್ರದೇಶವನ್ನು ವಾಣಿಜ್ಯ ವಿಮಾನಗಳಿಗೆ ಮುಚ್ಚಿತ್ತು. ಇದರಿಂದಾಗಿ ಕೆಲವು ಗಂಟೆಗಳ ಕಾಲ ವಿಮಾನಯಾನ ಸಂಸ್ಥೆಗಳಿಗೆ ಮಾರ್ಗ ಬದಲಾವಣೆ ಅನಿವಾರ್ಯವಾಯಿತು. ಪ್ರತಿಭಟನಾಕಾರರ ವಿರುದ್ಧ ಹಿಂಸಾಚಾರ ಮುಂದುವರಿದರೆ ಎಲ್ಲಾ ಆಯ್ಕೆಗಳನ್ನು ಅಮೆರಿಕ ಮುಕ್ತವಾಗಿಟ್ಟುಕೊಳ್ಳಲಿದೆ ಹಾಗೂ ಇರಾನ್ ಅದರ ಪರಿಣಾಮವನ್ನು ಅನುಭವಿಸಬೇಕಾಗುತ್ತದೆ ಎಂದು ಅಧ್ಯಕ್ಷ ಡೊನಾಲ್ಡ್ ಪುನಃ ಎಚ್ಚರಿಸಿದ್ದಾರೆ.

<><><><>

ಮಹಾರಾಷ್ಟ್ರದಾದ್ಯಂತ ಸ್ಥಳೀಯ ಸಂಸ್ಥೆ ಚುನಾವಣೆಯ ಮತ ಎಣಿಕೆ ಪ್ರಗತಿಯಲ್ಲಿದೆ. ಇತ್ತೀಚಿನ ವರದಿ ಪ್ರಕಾರ ಬಿಜೆಪಿ ನೇತೃತ್ವದ ಮಹಾಯುತಿ ಮೈತ್ರಿಕೂಟ ಮುನ್ನಡೆಯಲ್ಲಿದೆ. ಬಿಜೆಪಿ ಮೈತ್ರಿಕೂಟ ೩೦ ವರ್ಷಗಳ ಬಳಿಕ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಮುನ್ನಡೆಯಲ್ಲಿದೆ.

ಶಿವಸೇನೆಯ ಉದ್ಧವ್ ಠಾಕ್ರೆ ಬಣ ಎರಡನೇ ಸ್ಥಾನದಲ್ಲಿ ಮುನ್ನಡೆಯಲ್ಲಿದ್ದಾರೆ. ಮತದಾನ ನಿನ್ನೆ ನಡೆದಿದ್ದು, ಮರಾಠವಾಡ ಪ್ರದೇಶದ ಐದು ಪುರಸಭೆಗಳಲ್ಲಿ, ಛತ್ರಪತಿ ಸಂಭಾಜಿನಗರದಲ್ಲಿ ಶೇಕಡ ೫೯.೮೨ ರಷ್ಟು, ಜಲ್ನಾದಲ್ಲಿ ಶೇಕಡ ೬೧.೧೬ರಷ್ಟು. ಲಾತೂರ್‌ನಲ್ಲಿ ಶೇಕಡ ೬೦.೦೮ ರಷ್ಟು, ಪರ್ಬನಿಯಲ್ಲಿ ಶೇಕಡ ೫೫.೫೯ ರಷ್ಟು ಮತ್ತು ನಾಂದೇಡ್‌ನಲ್ಲಿ ಶೇಕಡ ೬೧.೩೭ ರಷ್ಟು ಮತದಾನವಾಗಿದೆ. ಈ ಮಧ್ಯೆ, ಛತ್ರಪತಿ ಸಂಭಾಜಿನಗರದಲ್ಲಿ, ಸಿಟಿ ಚೌಕ್ ಪೊಲೀಸರು ನಕಲಿ ಮತದಾನಕ್ಕೆ ಯತ್ನಿಸಿದ ಆರೋಪದ ಮೇಲೆ ಎಂಟು ಮಹಿಳೆಯರನ್ನು ಬಂಧಿಸಿದ್ದಾರೆ.

<><><>

ತಿರುವಳ್ಳುವರ್ ದಿನದ ಸಂದರ್ಭದಲ್ಲಿ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ನಾಗರಿಕರಿಗೆ ಶುಭಾಶಯಗಳನ್ನು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಉಪರಾಷ್ಟ್ರಪತಿ, ಪ್ರೀತಿ, ಕರುಣೆ ಮತ್ತು ಎಲ್ಲಾ ಜೀವಿಗಳ ಬಗ್ಗೆ ಕಾಳಜಿ ವಹಿಸುವ ಸದ್ಗುಣಗಳ ಕುರಿತು ತಿರುವಳ್ಳುವರ್ ಅವರು ಜಗತ್ತಿಗೆ ತಿಳಿ ಹೇಳಿದ್ದರು. ತತ್ವಜ್ಞಾನಿಗಳ ಮಾರ್ಗದರ್ಶನವು ಎಲ್ಲಾ ಯುಗಗಳಲ್ಲಿಯೂ ಪ್ರಸ್ತುತವಾಗಿದೆ ಎಂದು ತಿಳಿಸಿದ್ದಾರೆ.

<><><>

ನವದೆಹಲಿಯಲ್ಲಿಂದು ನಡೆಯಲಿರುವ ಇಂಡಿಯಾ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಖ್ಯಾತ ಶಟ್ಲರ್ ಲಕ್ಷ್ಯ ಸೇನ್, ಚೀನಾದ ತೈಪೆಯ ಲಿನ್ ಚುನ್-ಯಿ ಅವರನ್ನು ಎದುರಿಸಲಿದ್ದಾರೆ. ಇಂದಿರಾ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ೧೬ರ ಸುತ್ತಿನ ಪಂದ್ಯದಲ್ಲಿ ಲಕ್ಷ್ಯ ಸೇನ್ ಜಪಾನ್‌ನ ಕೆಂಟಾ ನಿಶಿಮೊಟೊ ಅವರನ್ನು ೨೧-೧೯, ೨೧-೧೦ ನೇರ ಸೆಟ್‌ಗಳಿಂದ ಸೋಲಿಸಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>